ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರು(ಆಡಳಿತ) ರವರ ಕಾರ್ಯಾಲಯ ಕಲಬುರಗಿ

ಸಂಖ್ಯೆ:ಸಿ1(1)/ಆಡಳಿತ/ಪ್ರಾಶಾಶಿ/ಬಡ್ತಿ/93/2020-21 ದಿನಾಂಕ:18-06-2021

**ಅಧಿಸೂಚನೆ**

ವಿಷಯ:- ದಿನಾಂಕ:01-01-2021 ರಲ್ಲಿದ್ದಂತೆ ಮೇರಿಟ್ ಆಧಾರದ ಮೇರೆಗೆ ಕಲಬುರಗಿ ಜಿಲ್ಲೆಯ ವ್ಯಾಪ್ತಿಯ ಸರಕಾರಿ ಪ್ರಾಥಮಿಕ ಶಾಲಾ ಕನ್ನಡ ಮಾಧ್ಯಮ ವೃಂದದ ಶಿಕ್ಷಕರಿಗೆ ಮುಖ್ಯ ಶಿಕ್ಷಕರ ಹುದ್ದೆಗೆ ಬಡ್ತಿ ನೀಡುವ ಸಂಬಂಧ ತಯ್ಯಾರಿಸಲಾದ 1:3 ತಾತ್ಕಾಲಿಕ ಅರ್ಹತಾ ಪಟ್ಟಿಯನ್ನು ಪ್ರಕಟಿಸುವ ಕುರಿತು.

ಉಲ್ಲೇಖ:-1)ಕರ್ನಾಟಕ ಸರ್ಕಾರಿ ನೌಕರರ(ಜೇಷ್ಠತಾ)ನಿಯಮಗಳು 1957 ನಿಯಮ(5) ರಂತೆ.

2)ಸರ್ಕಾರಿ ಪತ್ರ ಸಂಖ್ಯೆ:ಇಡಿ 202 ಎಸ್ಎಲ್‌ಬಿ 2014 ದಿನಾಂಕ:20-05-2014.

3)ಸರ್ಕಾರಿ ಪತ್ರ ಸಂಖ್ಯೆ:ಇಡಿ 152 ಎಲ್‌ಬಿಪಿ 2014 ದಿನಾಂಕ:20-05-2014.

4)ಸರ್ಕಾರದ ಪತ್ರ ಸಂಖ್ಯೆ:ಡಿ.ಪಿ.ಎ.ಆರ್186ಎಸ್.ಆರ್.ಎಸ್2018 ಬೆಂಗಳೂರು ದಿ:15-05-2019.

5)ಈ ಕಛೇರಿಯ ಅಧಿಸೂಚನೆ ಸಮ ಸಂಖ್ಯೆ ದಿ:08-12-2020,08-02-2021,20-03-2021, 05-06-2021.

- * * * * * -

ಕಲಬುರಗಿ ಜಿಲ್ಲೆಯ ವ್ಯಾಪ್ತಿಯ ಸರಕಾರಿ ಪ್ರಾಥಮಿಕ ಶಾಲಾ ಕನ್ನಡ ಮಾಧ್ಯಮ ವೃಂದದ ಶಿಕ್ಷಕರುಗಳಿಗೆ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರ ಹುದ್ದೆಗೆ ಮುಂಬಡ್ತಿ ನೀಡುವ ಸಂಬಂಧ ಸ್ಥಳಿಯ ವೃಂದ ಹಾಗೂ ಉಳಿದ ಮೂಲ ವೃಂದದ ಅರ್ಹ ಶಿಕ್ಷಕರ ತಾತ್ಕಾಲಿಕ ಅರ್ಹತಾ ಪಟ್ಟಿಯನ್ನು 1:3 ಅನುಪಾತದಲ್ಲಿ ತಯ್ಯಾರಿಸಲಾಗಿದ್ದು, ಅನುಬಂಧ-01ರಲ್ಲಿ ಸ್ಥಳಿಯ ವೃಂದ ಮತ್ತು ಉಳಿದ ಮೂಲ ವೃಂದದ ಶಿಕ್ಷಕರ ಪಟ್ಟಿಯನ್ನು ಪ್ರಕಟಿಸಲಾಗಿದೆ. ***ಸದರಿ ತಾತ್ಕಾಲಿಕ ಅರ್ಹತಾ ಪಟ್ಟಿಗೆ ಸಂಬಂಧಿಸಿದಂತೆ ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ:25-06-2021ರವರೆಗೆ ಈ ಕಛೇರಿಗೆ ನೇರವಾಗಿ ಆಕ್ಷೇಪಣಾ ಅರ್ಜಿಯನ್ನು ಸಲ್ಲಿಸತಕ್ಕದ್ದು.***

ಅದರಂತೆ ತಾತ್ಕಾಲಿಕ ಅರ್ಹತಾ ಪಟ್ಟಿಯಲ್ಲಿರುವ ಶಿಕ್ಷಕರ ಮೂಲ ಸೇವಾ ಪುಸ್ತಕ, 5 ವರ್ಷಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳು ಅಂಗೀಕಾರ ಪ್ರಾಧಿಕಾರದ ಷರಾದೊಂದಿಗೆ, ಇಲಾಖಾ ವಿಚಾರಣೆಗಳು, ಲೋಕಾಯುಕ್ತ ಪ್ರಕರಣಗಳು ಹಾಗೂ ನ್ಯಾಯಾಲಯದ ಪ್ರಕರಣಗಳು ಬಾಕಿ ಇರುವ/ಇಲ್ಲದಿರುವ ಬಗ್ಗೆ ದೃಢೀಕರಣ ಪತ್ರಗಳು, 371ಜೆ ಅನುಬಂಧ-ಎ & ಸಿ (ಸ್ಥಳಿಯ ವೃಂದದ ಶಿಕ್ಷಕರು) ಮತ್ತು ಕಡ್ಡಾಯ ಕನ್ನಡ ಪರೀಕ್ಷೆ ಪಾಸಾದ ಬಗ್ಗೆ ಅಥವಾ ಕನ್ನಡ ವಿನಾಯಿತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ದಿನಾಂಕ:25-06-2021 ರಂದು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಈ ಕಛೇರಿಗೆ ಸಲ್ಲಿಸತಕ್ಕದ್ದು. ***ಅದರಂತೆ ಬಡ್ತಿ ಕೌನ್ಸಿಲಿಂಗನಲ್ಲಿ ಆದ್ಯತೆ ಬಯಸುವ ಅಂಗವೀಕಲ ಶಿಕ್ಷಕರು ಕಡ್ಡಾಯವಾಗಿ ವೈದ್ಯಕೀಯ ಮಂಡಳಿಯಿಂದ ಪಡೆದ ಇತ್ತಿಚಿನ ತ್ರೀ ಸದಸ್ಯ ಸಮಿತಿಯ ಮಂಜೂರು ಮಾಡಿದ ವೈದ್ಯಕೀಯ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.***

ಉಪ ನಿರ್ದೇಶಕರು(ಆಡಳಿತ)
ಸಾರ್ವಜನಿಕ ಶಿಕ್ಷಣ ಇಲಾಖೆ
ಕಲಬುರಗಿ

ಅಡಕ:-ಅನುಬಂಧ-01

ಗೆ,

1) ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
2) ಈ ಕಛೇರಿಯ ಸಿ1(2) ಶಾಖೆಗೆ ಸೂಕ್ತ ಕ್ರಮಕ್ಕಾಗಿ.
3) ಈ ಕಛೇರಿಯ ಇ-ಗೌರ್ನರ್ಸ್‌ಕ್ಕೆ ಕೊಡುತ್ತಾ ಈ ಕಾರ್ಯಾಲಯದಲ್ಲಿ ವೆಬ್‌ಸೈಟ್‌ದಲ್ಲಿ ಪ್ರಕಟಿಸಲು ತಿಳಿಸಿದೆ.

ಪ್ರತಿಯನ್ನು:-

1) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆಯ ಸಚಿವಾಲಯ ಬಹುಮಹಡಿಗಳ ಕಟ್ಟಡ ಬೆಂಗಳೂರು ಇವರಿಗೆ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
2) ಮಾನ್ಯ ಆಯುಕ್ತರು ಬೆಂಗಳೂರು ಹಾಗೂ ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
3) ಮಾನ್ಯ ನಿರ್ದೇಶಕರು ಅಪರ ಆಯುಕ್ತರ ಕಛೇರಿ ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
4) ಮಾನ್ಯ ಸಹ ನಿರ್ದೇಶಕರು(ಆಡಳಿತ) ಅಪರ ಆಯುಕ್ತರ ಕಛೇರಿ ಕಲಬುರಗಿ ರವರ ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.